## ಜೆಎಸ್‌ಎಸ್ ಮಹಾವಿದ್ಯಾಪೀಠ
## ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ – 312

**27 ಏಪ್ರಿಲ್ 2024 * ಶನಿವಾರ * ಸಂಜೆ 6.00**

**ಸ್ಥಳ : ಶ್ರೀ ಶಿವರಾತ್ರಿ ರಾಜೇಂದ್ರ ಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಮೈಸೂರು**

---

**ದಿವ್ಯ ಆಶೀರ್ವಾದ**

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

**ಅಧ್ಯಕ್ಷತೆ**

**ನಿ.ಪ್ರ.ಸ್ವ. ಶ್ರೀ ಶ್ರೀಕಂಠ ಸ್ವಾಮಿಗಳು**

ಶ್ರೀ ವಿರಕ್ತಮಠ, ಮುಡಿಗುಂಡ, ಕೊಳ್ಳೇಗಾಲ ತಾ.

**ಉಪನ್ಯಾಸ**

**ಪ್ರೊ. ಎಸ್. ಮಲ್ಲಣ್ಣ**

ನಿವೃತ್ತ ಪ್ರಾಂಶುಪಾಲರು ಹಾಗೂ ಸುಗಮ ಸಂಗೀತ ಕಲಾವಿದರು, ಮೈಸೂರು

**ವಿಷಯ : ಭುವನದ ಭಾಗ್ಯ ಪೂಜ್ಯ ಶ್ರೀ ಶಿವಕುಮಾರ ಮಹಾಸ್ವಾಮಿಗಳು**

**ವಚನ ಗಾಯನ**

**ಕು. ಎನ್. ಚೂಡಾಮಣಿ**

ಮೈಸೂರು

---

**ಪ್ರಾಯೋಜಕರು**

**ಶ್ರೀಮತಿ ಎಸ್. ನಾಗಮ್ಮ ಷಡಕ್ಷರಿ**

ಕುವೆಂಪುನಗರ, ಮೈಸೂರು

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿಯಂಥ ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ಪ್ರಾರಂಭಿಸಿದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಈ ದತ್ತಿಯ ವತಿಯಿಂದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ನಿ.ಪ್ರ.ಸ್ವ. ಶ್ರೀ ಶ್ರೀಕಂಠ ಸ್ವಾಮಿಗಳು** ಕೊಳ್ಳೇಗಾಲಕ್ಕೆ ಹೊಂದಿಕೊಂಡಂತಿರುವ ಮುಡಿಗುಂಡ ಶ್ರೀ ವಿರಕ್ತಮಠದ ಅಧ್ಯಕ್ಷರು. ಸ್ನಾತಕೋತ್ತರ ಪದವೀಧರರು. ವಚನ ಸಾಹಿತ್ಯದಲ್ಲಿ ಅಪಾರ ಆಸಕ್ತಿಯನ್ನು ಹೊಂದಿದ್ದಾರೆ. ಉತ್ತಮ ಉಪನ್ಯಾಸಕರು. ತಾತ್ವಿಕ ಚಿಂತನೆಯಲ್ಲಿ ತೊಡಗಿಸಿಕೊಂಡಿರುವವರು. ಮಠವನ್ನು ಅತ್ಯಂತ ಸಮರ್ಥವಾಗಿ ನಿರ್ವಹಿಸಿಕೊಂಡು ಹೋಗುತ್ತಿದ್ದಾರೆ.

**ಪ್ರೊ. ಎಸ್. ಮಲ್ಲಣ್ಣನವರು** ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕಿನ ಗುಂಡೇಗಾಲ ಗ್ರಾಮದವರು. ಜೆಎಸ್‌ಎಸ್ ಕಾಲೇಜಿನಲ್ಲಿ ಇಂಗ್ಲಿಷ್ ಅಧ್ಯಾಪಕರಾಗಿ ವೃತ್ತಿ ಆರಂಭಿಸಿ, ಪ್ರಾಂಶುಪಾಲರಾಗಿ ನಿವೃತ್ತಿ ಹೊಂದಿದ್ದಾರೆ. ನಾಡಿನೆಲ್ಲೆಡೆ ಹಾಗೂ ವಿದೇಶದಲ್ಲೂ ಸುಗಮ ಸಂಗೀತದ 500ಕ್ಕೂ ಹೆಚ್ಚು ಗಾಯನ ಕಾರ್ಯಕ್ರಮಗಳನ್ನು ನೀಡಿದ್ದಾರೆ. ಸಿಡಿಗಳಿಗೆ, ಆಕಾಶವಾಣಿಯಲ್ಲಿ ಹಾಡಿದ ಭಾವಗೀತೆಗಳಿಗೆ ಸ್ವತಃ ರಾಗಸಂಯೋಜನೆ ಮಾಡಿ ಹಾಡಿದ್ದಾರೆ. ಈ ಟಿವಿ, ಜಿ ಟಿವಿ, ಬೆಂಗಳೂರು ದೂರದರ್ಶನ, ಜ್ಞಾನವಾಹಿನಿಯಲ್ಲಿ ಹಾಡಿದ್ದಾರೆ. ಇವರಿಗೆ ಕರ್ನಾಟಕ ಕಲಾಶ್ರೀ, ಹೊಯ್ಸಳ ಪ್ರಶಸ್ತಿ, ರೋಟರಿ ರಾಜ್ಯೋತ್ಸವ ಪ್ರಶಸ್ತಿ, ರಂಗಚಾರ್ಲು ಪ್ರಶಸ್ತಿ ಸೇರಿದಂತೆ ಹಲವು ಪುರಸ್ಕಾರಗಳು ಲಭಿಸಿವೆ.

**ಶ್ರೀಮತಿ ಎಸ್. ನಾಗಮ್ಮ ಷಡಕ್ಷರಿಯವರು** ಚಾಮರಾಜನಗರ ತಾಲ್ಲೂಕು ನಂಜೇದೇವನಪುರದವರು. ಬಾಲ್ಯದಿಂದಲೂ ಅಧ್ಯಾತ್ಮದಲ್ಲಿ ಆಸಕ್ತಿಯನ್ನು ಹೊಂದಿರುವರು. ನಡೆ–ನುಡಿಯಲ್ಲಿ ಶರಣರ ಆಚಾರ–ವಿಚಾರಗಳನ್ನು ಮೈಗೂಡಿಸಿಕೊಂಡಿದ್ದಾರೆ. ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಇವರ ಪತಿ ಕಬ್ಬಹಳ್ಳಿಯ ದಿವಂಗತ ಶ್ರೀ ಷಡಕ್ಷರಿಯವರು ತೋಟಗಾರಿಕೆ ಇಲಾಖೆಯಲ್ಲಿ ಉಪನಿರ್ದೇಶಕರಾಗಿದ್ದರು. ಶ್ರೀ ಕೆ.ಎಸ್. ನಾಗೇಂದ್ರ ಪ್ರಸಾದ್ ಮತ್ತು ಶ್ರೀಮತಿ ಕೆ.ಎಸ್. ನಂದಾ ಇವರ ಮಕ್ಕಳು.